ಅಸಲು ದಾವಾ ನಂಃ220/2018
ಪಿ.ಡಬ್ಲ್ಯೂಃ04

<u>ದಿನಾಂಕಃ02-07-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲು: ಶ್ರೀ ಎಂ ಎಸ್ ಆರ್., ಪ್ರತಿವಾದಿ ಪರ ವಕೀಲರಿಂದ</u>

ನನ್ನ ತಾಯಿಯ ಹೆಸರು ಬೋರಮ್ಮ. ನನ್ನ ತಾಯಿ ಬೋರಮ್ಮ ಮತ್ತು 2 ನೇ ವಾದಿ ಖಾಸಾ ಅಕ್ಕ ತಂಗಿಯರು ಎಂದರೆ ಸರಿ. ನಾನು ಹಲವು ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳಲ್ಲಿ ಸಾಕ್ಷಿದಾರನಾಗಿ ಸಾಕ್ಷಿ ಹೇಳಲು ನ್ಯಾಯಾಲಯಕ್ಕೆ ಬಂದಿರುತ್ತೇನೆ ಎಂದರೆ ಸರಿಯಲ್ಲ. 2 ನೇ ವಾದಿ ಮತ್ತು 2 ನೇ ಪ್ರತಿವಾದಿ 1998 ನೇ ಸಾಲಿನಲ್ಲಿ ದಾವಾ ಸ್ವತ್ತಿನ ಐಟಂ ನಂ.2 ರ ಜಮೀನನ್ನು ಕ್ರಯಕ್ಕೆ ಪಡೆದಿರುತ್ತಾರೆ ಎಂದರೆ ಸರಿ. ಸದರಿ ಜಮೀನಿನ ಕಂದಾಯ ದಾಖಲೆಗಳು 2 ನೇ ವಾದಿ ಮತ್ತು 2 ನೇ ಪ್ರತಿವಾದಿಯರ ಹೆಸರಿನಲ್ಲಿವೆ ಎಂದರೆ ಸರಿ. ದಾವಾ ಸ್ವತ್ತಿನ ಐಟಂ ನಂ.2 ರ ಜಮೀನಿಗೆ 2 ನೇ ವಾದಿ ಮತ್ತು 2 ನೇ ಪ್ರತಿವಾದಿಯನ್ನು ಹೊರತುಪಡಿಸಿ ಬೇರೆ ಯಾರಿಗೂ ಹಕ್ಕು ಇಲ್ಲ ಎಂದರೆ ಸರಿ.

2. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನನ್ನು 1 ನೇ ಪ್ರತಿವಾದಿ 1993 ನೇ ಸಾಲಿನಲ್ಲಿ ಕ್ರಯಕ್ಕೆ ಪಡೆದಿರುತ್ತಾರೆ. ಸದರಿ ಕ್ರಯಪತ್ರದ ಸಂದರ್ಭದಲ್ಲಿ ಸಾಕ್ಷಿದಾರ ಬಸಯ್ಯನಿಗೆ 15 ವರ್ಷ ವಯಸ್ಸು ಆಗಿರುತ್ತದೆ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನಿನ ಸಂಬಂಧ ಕ್ರಯಪತ್ರ ಹಾಗೂ ಕಂದಾಯ ದಾಖಲೆಗಳು 1 ನೇ ಪ್ರತಿವಾದಿಯ ಹೆಸರಿನಲ್ಲಿವೆ ಎಂದರೆ ಸರಿ. ಕ್ರಯಕ್ಕೆ ಪಡೆದಾಗಿನಿಂದ 1 ನೇ ಪ್ರತಿವಾದಿಯೇ ಸದರಿ ಜಮೀನಿಗೆ ಕಂದಾಯವನ್ನು ಕಟ್ಟಿಕೊಂಡು ಬಂದಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಇಬ್ಬರೂ ಕೂಡಿ ಕಂದಾಯವನನ್ನು ಕಟ್ಟಿರುತ್ತಾರೆ ಆದರೆ ರಶೀದಿಯನ್ನು ಮಾತ್ರ 1 ನೇ ಪ್ರತಿವಾದಿಯ ಹೆಸರಿನಲ್ಲಿವೆ.

3. 1 ನೇ ಪ್ರತಿವಾದಿ ದಾವಾ ಸ್ವತ್ತಿನ ಐಟಂ ನಂ.1 ರ ಜಮೀನನ್ನು ನೇಲಗೇತನಹಟ್ಟಿ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಆಧಾರವಾಗಿಟ್ಟು ಸಾಲವನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನು 1 ನೇ ಪ್ರತಿವಾದಿಯ ಸ್ವಯಾರ್ಜಿತ ಜಮೀನು ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಒಟ್ಟಿಗೆ ಇದ್ದ ಸಂದರ್ಭದಲ್ಲಿ ಒಟ್ಟು ಕುಟುಂಬದ ಆಸ್ತಿ ಎಂದು ಖರೀದಿಸಿದ್ದಾರೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನಿಗೆ 1 ನೇ ಪ್ರತಿವಾದಿಯನ್ನು ಹೊರತುಪಡಿಸಿ ಬೇರೆ ಯಾರಿಗೂ

ಹಕ್ಕು ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನು 1 ನೇ ವಾದಿ ಮತ್ತು 1 ನೇ ಪ್ರತಿವಾದಿಯ ಒಟ್ಟು ಕುಟುಂಬದ ಆಸ್ತಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಜಮೀನನ್ನು 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಜಂಟಿಯಾಗಿ ಖರೀದಿಸಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನಿನಲ್ಲಿ 1 ನೇ ವಾದಿಯು ಯಾವತ್ತಿಗೂ ಸಹ ಸ್ವಾಧೀನಾನುಭವ ಹೊಂದಿಲ್ಲ ಎಂದರೆ ಸರಿಯಲ್ಲ. ವಾದಿಯರಿಗೆ ಅನುಕೂಲವಾಗಲೀ ಎಂದು ಸುಳ್ಳು ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.

ಅಸಲು ದಾವಾ ನಂ:220/2018
ಪಿ.ಡಬ್ಲ್ಯೂ:05

<u>ದಿನಾಂಕ:02-07-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲು: ಶ್ರೀ ಎಂ ಎಸ್ ಆರ್., ಪ್ರತಿವಾದಿ ಪರ ವಕೀಲರಿಂದ</u>

ನನ್ನ ತಂದೆ ಪೂರ್ಣ ಮುತ್ತಪ್ಪರವರು 1996ನೇ ಸಾಲಿನಲ್ಲಿ ಪೌತಿಯಾಗಿರುತ್ತಾರೆ. ಸದರಿಯವರು ಶಾಸಕರಾಗಿದ್ದರು. ಆದ್ದರಿಂದ ನನಗೆ ಜನ ಸಂಪರ್ಕ ಜಾಸ್ತಿ. ಯಾವುದೇ ವ್ಯಕ್ತಿ ಸಹಾಯ ಕೋರಿ ಪೊಲೀಸ ಠಾಣೆಗೆ, ನ್ಯಾಯಾಲಯಕ್ಕೆ, ಸರ್ಕಾರಿ ಕಚೇರಿಗಳಿಗೆ ಕರೆದರೆ ನಾನು ಹೋಗುತ್ತೇನೆ. ನಾನು ನೇಲಗೇತನಹಟ್ಟಿಯಲ್ಲಿ ಪಂಚಾಯಿತಿಗಳನ್ನು ನಡೆಸುತ್ತೇನೆ. ಚಳ್ಳಕೆರೆ ನ್ಯಾಯಾಲಯದ ಸ್ಥಾಪಿತವಾದಾಗಿನಿಂದ ಇಲ್ಲಿಯವರೆಗೂ ಬಹಳಷ್ಟು ಪ್ರಕರಣಗಳಲ್ಲಿ ನಾನು ಸಾಕ್ಷ್ಯವನ್ನು ಹೇಳಿರುತ್ತೇನೆ. ದಾವಾ ಸ್ವತ್ತಿನ ಐಟಂ ನಂ.2ರ ಜಮೀನನ್ನು 2ನೇ ವಾದಿ ಮತ್ತು 2ನೇ ಪ್ರತಿವಾದಿ ಜಂಟಿಯಾಗಿ ಕ್ರಯಕ್ಕೆ ಪಡೆದಿರುತ್ತಾರೆ ಮತ್ತು ಕಂದಾಯ ದಾಖಲೆಗಳು ಸದರಿಯವರ ಹೆಸರಿನಲ್ಲಿವೆ ಎಂದರೆ ಸರಿ. ದಾವಾ ಸ್ವತ್ತಿನ ಐಟಂ ನಂ.2ರ ಜಮೀನಿನಲ್ಲಿ 2ನೇ ವಾದಿ ಮತ್ತು 2ನೇ ಪ್ರತಿವಾದಿಯನ್ನು ಹೊರತುಪಡಿಸಿ ಬೇರೆ ಯಾರಿಗೂ ಹಕ್ಕು ಇಲ್ಲ ಎಂದರೆ ಸರಿ.

2. ದಾವಾ ಸ್ವತ್ತಿನ ಐಟಂ ನಂ.1ರ ಜಮೀನಿನ ಕಂದಾಯ ದಾಖಲೆಗಳು 1ನೇ ಪ್ರತಿವಾದಿಯ ಹೆಸರಿನಲ್ಲಿವೆ ಎಂದರೆ ಸರಿ. ಕ್ರಯಪತ್ರದ ಮುಖಾಂತರ ಬಂದ ದಾವಾ ಸ್ವತ್ತಿನ ಐಟಂ ನಂ.1ರ ಜಮೀನಿಗೆ 1ನೇ ಪ್ರತಿವಾದಿಯೇ ಕಂದಾಯವನ್ನು ಕಟ್ಟಿಕೊಂಡು ಬಂದಿರುತ್ತಾರೆ ಎಂದರೆ ಸರಿ. ದಾವಾ ಸ್ವತ್ತಿನ ಐಟಂ ನಂ.1ರ ಜಮೀನಿನಲ್ಲಿ 1ನೇ ಪ್ರತಿವಾದಿಯನ್ನು ಹೊರತುಪಡಿಸಿ ಬೇರೆ ಯಾರಿಗೂ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ಸದರಿ ಜಮೀನನ್ನು 1ನೇ ವಾದಿ ಮತ್ತು 1ನೇ ಪ್ರತಿವಾದಿ ಒಟ್ಟಾಗಿ ಖರೀದಿಸಿದ್ದಾರೆ ಎಂದು ನುಡಿಯುತ್ತಾರೆ. ಸದರಿ ಜಮೀನನ್ನು 1993 ನೇ ಇಸವಿಯಲ್ಲಿ 1ನೇ ಪ್ರತಿವಾದಿ ಕ್ರಯಕ್ಕೆ ಪಡೆದಿರುತ್ತಾರೆ ಆದರೆ ನಿಖರವಾದ ದಿನಾಂಕ ಮತ್ತು ತಿಂಗಳು ಹೇಳಲು ಆಗುವುದಿಲ್ಲ. ಸದರಿ ಕ್ರಯಪತ್ರಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಜಮೀನು 1ನೇ ಪ್ರತಿವಾದಿಯ ಸ್ವಯಾರ್ಜಿತ ಜಮೀನು ತಿಳಿದಿದ್ದರೂ ಸಹ ಸದರಿ ಜಮೀನನ್ನು 1ನೇ ವಾದಿ ಮತ್ತು 1ನೇ ಪ್ರತಿವಾದಿ ಜಂಟಿಯಾಗಿ ಖರೀದಿಸಿದ್ದಾರೆ

ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ಇಬ್ಬರು ಒಟ್ಟಿಗೆ ಅನುಭವದಲ್ಲಿದ್ದರು ಎಂದು ನುಡಿಯುತ್ತಾರೆ.

3. ನಾನು ಒಂದು ರಾಜಕೀಯ ಪಕ್ಷದಲ್ಲಿ ಗುರುತಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. 1ನೇ ವಾದಿ ಮೊದಲಿನಿಂದಲೂ ನನ್ನ ಪಕ್ಷದ ಕಾರ್ಯಕರ್ತ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ಆತನು ನನ್ನ ಅಭಿಮಾನಿ ಎಂದು ನುಡಿಯುತ್ತಾರೆ. 1ನೇ ಪ್ರತಿವಾದಿ ಯಾವಾಗಲೂ ನನ್ನ ವಿರೋಧಿ ಪಕ್ಷದಲ್ಲಿ ಗುರುತಿಸಿಕೊಂಡಿರುತ್ತಾನೆ ಎಂದರೆ ಸರಿಯಲ್ಲ. ವಾದಿಯರಿಗೆ ಅನುಕೂಲವಾಗಲೀ ಎಂದು ಸುಳ್ಳು ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.

ಅಸಲು ದಾವಾ ನಂ:220/2018
ಪಿ.ಡಬ್ಲ್ಯೂ:03

**<u>ದಿನಾಂಕ:02-07-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

<u>ಪಾಟೀ ಸವಾಲು: ಶ್ರೀ ಎಂ ಎಸ್ ಆರ್., ಪ್ರತಿವಾದಿ ಪರ ವಕೀಲರಿಂದ</u>

ದಾವಾ ಸ್ವತ್ತಿನ ಐಟಂ ನಂ.2 ರ ಜಮೀನನ್ನು 2 ನೇ ವಾದಿ ಮತ್ತು 2 ನೇ ಪ್ರತಿವಾದಿ ಜಂಟಿಯಾಗಿ ಕ್ರಯಕ್ಕೆ ಪಡೆದಿರುತ್ತಾರೆ ಮತ್ತು ಕಂದಾಯ ದಾಖಲೆಗಳು ಸದರಿಯವರ ಹೆಸರಿನಲ್ಲಿವೆ ಎಂದರೆ ಸರಿ. ದಾವಾ ಸ್ವತ್ತಿನ ಐಟಂ ನಂ.2 ರ ಜಮೀನಿನಲ್ಲಿ 2 ನೇ ವಾದಿ ಮತ್ತು 2 ನೇ ಪ್ರತಿವಾದಿಯನ್ನು ಹೊರತುಪಡಿಸಿ ಬೇರೆ ಯಾರಿಗೂ ಹಕ್ಕು ಇಲ್ಲ ಎಂದರೆ ಸರಿ. 1 ನೇ ಪ್ರತಿವಾದಿ ನನ್ನ ತಂದೆ. ನಾನು, ನನ್ನ ಹೆಂಡತಿ ಮಕ್ಕಳೊಂದಿಗೆ ಪ್ರತ್ಯೇಕವಾಗಿ ವಾಸ ಇದ್ದೇನೆ. 1 ನೇ ಪ್ರತಿವಾದಿ ನನ್ನ ಮನೆಗೆ ಬರುವುದಿಲ್ಲ ಮತ್ತು ನಾನು ಸದರಿಯವರ ಮನೆಗೆ ಹೋಗುವುದಿಲ್ಲ ಎಂದರೆ ಸರಿ. 1 ನೇ ವಾದಿ ಮತ್ತು ನಾನು ವಿಶ್ವಾಸದಿಂದ ಇದ್ದೇವೆ ಎಂದರೆ ಸರಿ.

2. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನನ್ನು 1 ನೇ ಪ್ರತಿವಾದಿ ಕ್ರಯಕ್ಕೆ ಪಡೆದಿರುತ್ತಾರೆ ಮತ್ತು ಕಂದಾಯ ದಾಖಲೆಗಳು ಅವರ ಒಬ್ಬರ ಹೆಸರಿನಲ್ಲಿವೆ ಎಂದರೆ ಸಾಕ್ಷಿಯ 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಒಟ್ಟಿಗೆ ಇದ್ದ ಕಾಲದಲ್ಲಿ ಸದರಿ ಜಮೀನನ್ನು ಖರೀದಿಸಿದ್ದಾರೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನಿನಲ್ಲಿ 1 ನೇ ಪ್ರತಿವಾದಿಯನ್ನು ಮಾತ್ರ ಹಕ್ಕು ಇರುತ್ತದೆ ಅವರನ್ನು ಹೊರತುಪಡಿಸಿ ಬೇರೆ ಯಾರಿಗೂ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ವಾದಿಗೂ ಹಕ್ಕು ಇರುತ್ತದೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನನ್ನು 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಒಟ್ಟಿಗೆ ಖರೀದಿಸಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3. ನನ್ನ ದೊಡ್ಡಪ್ಪನಾದ ಬಂಗಾರಯ್ಯರವರು ನನ್ನ ತಂದೆ ಮತ್ತು 1 ನೇ ವಾದಿಯ ಮೇಲೆ ದಾವೆ ಹೂಡಿದ್ದರು ಎಂದರೆ ಸರಿ. ಸದರಿ ದಾವೆಯಲ್ಲಿ 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಜಂಟಿಯಾಗಿ ಸಲ್ಲಿಸಿದ್ದ ತಕರಾರಿನ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ತಂದೆಯ ಮೇಲಿನ ದ್ವೇಷದಿಂದ ಮತ್ತು ನನ್ನ ಚಿಕ್ಕಪ್ಪನಿಗೆ ಅನುಕೂಲವಾಗಲೀ ಎಂದು ಸುಳ್ಳು ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ : ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ  ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.

ಅಸಲು ದಾವಾ ನಂ:220/2018
ಪಿ.ಡಬ್ಲ್ಯೂ:02

<u>ದಿನಾಂಕ:02-07-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲು: ಶ್ರೀ ಎಂ ಎಸ್ ಆರ್., ಪ್ರತಿವಾದಿ ಪರ ವಕೀಲರಿಂದ</u>

ನಾನು ವಿದ್ಯಾಭ್ಯಾಸ ಮಾಡಿಲ್ಲ. ಕಾರ್ತಿಕೇನಹಟ್ಟಿಯಿಂದ ರಾಮದುರ್ಗಕ್ಕೆ 10 ಕಿ.ಮೀ. ಅಂತರ ಇದೆ. ದಾವಾ ಸ್ವತ್ತಿನ ಐಟಂ ನಂ.1 ರ ಸರ್ವೇ ನಂ.15 ಮತ್ತು ಹಿಸ್ಸಾ ನಂಬರ ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನ ಐಟಂ ನಂ.2 ರ ಹಿಸ್ಸಾ ನಂಬರ ನನಗೆ ಗೊತ್ತಿಲ್ಲ. ಸದರಿ ದಾವೆಯನ್ನು ಎಷ್ಟು ಆಸ್ತಿಗಳ ಸಂಬಂಧ ಹೂಡಲಾಗಿದೆ ಎಂದು ನನಗೆ ಹೇಳಲು ಆಗುವುದಿಲ್ಲ. ಸದರಿ ದಾವೆಯನ್ನು ಪಾಪಯ್ಯ ಮತ್ತು ಪಾಲಯ್ಯ ಎಂಬುವರ ಮೇಲೆ ಹೂಡಲಾಗಿದೆ. ಸರ್ವೇ ನಂ.15 ರ ಒಟ್ಟು ವಿಸ್ತೀರ್ಣ ನನಗೆ ಗೊತ್ತಿಲ್ಲ. ದಾವಾ ಸ್ವತ್ತಿಗೆ ಸಂಬಂಧಿಸಿದ ಪಹಣಿಗಳಲ್ಲಿ ಸದರಿ ಆಸ್ತಿಗಳು ಯಾರ ಹೆಸರಿನಲ್ಲಿ ಇವೆ ಎಂದು ನನಗೆ ಹೇಳಲು ಆಗುವುದಿಲ್ಲ.

2. ದಾವಾ ಸ್ವತ್ತುಗಳ ಚೆಕ್ ಬಂದಿ ನನಗೆ ಹೇಳಲು ಆಗುವುದಿಲ್ಲ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನು 1 ನೇ ಪ್ರತಿವಾದಿಯ ಹೆಸರಿಗೆ ಖಾತೆ ಆಗಿದೆ ಎಂದರೆ ಸರಿ. 1 ನೇ ಪ್ರತಿವಾದಿಯು ಸದರಿ ಜಮೀನನ್ನು ಕ್ರಯಕ್ಕೆ ಪಡೆದಿರುತ್ತಾರೆ ಮತ್ತು ಅಂದಿನಿಂದ ಕಂದಾಯವನ್ನು ಪಾವತಿಸಿರುತ್ತಾರೆ ಎಂದರೆ ಸರಿ. ಸದರಿ ಜಮೀನು 1 ನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತು ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನನ್ನು 1 ನೇ ವಾದಿ ಮತ್ತು 1 ನೇ ಪ್ರತಿವಾದಿ ಜಂಟಿ ಯಾಗಿ ಖರೀದಿಸಿದ್ದಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ನಾವು ಮಾರಾಟ ಮಾಡಿರುತ್ತೇವೆ ಎಂದು ನುಡಿಯುತ್ತಾರೆ.

3. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನಿನಲ್ಲಿ 1 ನೇ ಪ್ರತಿವಾದಿಗೆ ಮಾತ್ರ ಹಕ್ಕಿದ್ದು, ವಾದಿಯರಿಗೆ ಯಾವುದೇ ಹಕ್ಕಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಐಟಂ ನಂ.2 ರ ಜಮೀನಿನಲ್ಲಿ 2 ನೇ ವಾದಿ ಮತ್ತು 2 ನೇ ಪ್ರತಿವಾದಿಗೆ ಮಾತ್ರ ಹಕ್ಕು ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಜಮೀನನ್ನು 2 ನೇ ವಾದಿ ಮತ್ತು 2 ನೇ ಪ್ರತಿವಾದಿ ಕ್ರಯಕ್ಕೆ ಕೊಂಡಿದ್ದು, ಕಂದಾಯ ದಾಖಲೆಗಳು ಕೂಡ ಅವರಿಬ್ಬರ ಜಂಟಿ ಹೆಸರಿನಲ್ಲಿ ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ.

4. 1 ನೇ ಪ್ರತಿವಾದಿಯ ಅಣ್ಣನಾದ ಬಂಗಾರಯ್ಯರವರನ್ನು ನಾನು ನೋಡಿಲ್ಲ.

ಓ.ಎಸ್.ನಂ.19/2003 ರ ದಾವೆಯ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನ ಐಟಂ ನಂ.1 ರ ಜಮೀನು 1 ನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತಾಗಿದ್ದು ಮತ್ತು ದಾವಾ ಸ್ವತ್ತಿನ ಐಟಂ ನಂ.2 ರ ಜಮೀನು 2 ನೇ ವಾದಿ ಮತ್ತು 2 ನೇ ಪ್ರತಿವಾದಿಗೆ ಮಾತ್ರ ಹಕ್ಕಿದೆ ಎಂದು ತಿಳಿದಿದ್ದರೂ ಸಹ ಸುಳ್ಳು ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ : ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.